Akashvani : Bangalore
Regional Bulletin In Kannada
02.09.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೆಷನರಿ ಪೂರ್ವಭಾವಿ ಮರು ಪರೀಕ್ಷೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
- ಮುಡಾ ನಿವೇಶನ ಪ್ರಕರಣ; ಉಚ್ಚ ನ್ಯಾಯಾಲಯದಲ್ಲಿ ಇಂದು ಮಧ್ಯಾಹ್ನ ವಿಚಾರಣೆ
- ಬಾಲ್ಯ ವಿವಾಹ ತಡೆಯಲು ನೂತನ ಕಾಯ್ದೆ ಜಾರಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಚಿಂತನೆ
- ಇಸ್ರೋ ಆದಿತ್ಯ ಎಲ್-೧ ನೌಕೆ ಉಡಾವಣೆಗೆ ಒಂದು ವರ್ಷ; ಸೂರ್ಯನ ಅಧ್ಯಯನದಲ್ಲಿ ಮಹತ್ವದ ಪ್ರಗತಿ
- ರಾಷ್ಟ್ರೀಯ ಮುಕ್ತ ಕ್ರೀಡಾಕೂಟ; ಪುರುಷರ ೧೦ ಸಾವಿರ ಮೀಟರ್ ಸ್ಪರ್ಧೆಯಲ್ಲಿ ರೈಲ್ವೇಸ್ ತಂಡದ ಅಭಿಷೇಕ್‌ಗೆ ಚಿನ್ನ

<><*<><>*><>

ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೆಷನರಿ ಪರೀಕ್ಷೆಯಲ್ಲಿ ಅಸಮರ್ಪಕ ಕನ್ನಡ ಅನುವಾದದ ಪ್ರಶ್ನೆಗಳ ಹಿನ್ನೆಲೆಯಲ್ಲಿ ಎಲ್ಲ ಅಭ್ಯರ್ಥಿಗಳಿಗೆ ನ್ಯಾಯ ಸಿಗುವಂತೆ ೨ ತಿಂಗಳೊಳಗೆ ಮರು ಪರೀಕ್ಷೆ ನಡೆಸುವಂತೆ ಕೆಪಿಎಸ್‌ಸಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಪ್ರಕಟಿಸಿರುವ ಅವರು, ಕರ್ತವ್ಯ ಲೋಪವೆಸಗಿದ ಅಧಿಕಾರಿಗಳನ್ನು ಸೇವೆಯಿಂದ ಅಮಾನತು ಮಾಡಲಾಗಿದೆ. ಮುಂಬರುವ ಪರೀಕ್ಷೆಗಳನ್ನು ಅತ್ಯಂತ ಜವಾಬ್ದಾರಿಯುತವಾಗಿ, ಸಮರ್ಪಕವಾಗಿ ನಡೆಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ನೇಮಕಾತಿ ಪ್ರಕ್ರಿಯೆಗಳ ಸಮಗ್ರತೆ ಮತ್ತು ನಂಬಿಕಾರ್ಹತೆಯನ್ನು ಎತ್ತಿಹಿಡಿದು, ಪರೀಕ್ಷಾರ್ಥಿಗಳ ಹಿತರಕ್ಷಿಸಲು ಬದ್ಧರಾಗಿದ್ದೇವೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ತನಿಖೆಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮ ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅರ್ಜಿಯ ವಿಚಾರಣೆ ಉಚ್ಚ ನ್ಯಾಯಾಲಯದಲ್ಲಿ ಇಂದು ಮುಂದುವರಿಯಲಿದೆ. ಸಿದ್ದರಾಮಯ್ಯ ಪರವಾಗಿ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಈಗಾಗಲೇ ವಾದ ಮಂಡಿಸಿದ್ದಾರೆ. ರಾಜ್ಯಪಾಲರ ಪರವಾಗಿ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ದೂರುದಾರರ ಪರವಾಗಿ ಅವರ ವಕೀಲರು ವಾದ ಮಂಡಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದಿನಿಂದ ಎರಡು ದಿನಗಳ ಕಾಲ ಮೈಸೂರು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಇಂದು ಮೈಸೂರಿನಲ್ಲಿ ವಾಸ್ತವ್ಯ ಹೂಡಲಿರುವ ಅವರು, ನಾಳೆ

ಚಾಮುಂಡಿ ಬೆಟ್ಟಕ್ಕೆ ತೆರಳಿ, ಚಾಮುಂಡೇಶ್ವರಿ ದರ್ಶನ ಪಡೆಯಲಿದ್ದಾರೆ. ನಂತರ ಅವರು, ಚಾಮುಂಡಿ ಬೆಟ್ಟದ ದಾಸೋಹ ಭವನದಲ್ಲಿ ನಡೆಯಲಿರುವ ಚಾಮುಂಡಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಬಾಲ್ಯ ವಿವಾಹ ತಡೆಯಲು ನೂತನ ಕಾಯ್ದೆ ಜಾರಿಗೆ ತರಲಾಗುವುದು ಎಂದು ಚಿತ್ರದುರ್ಗದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಗೃಹ, ಡಿಪಿಆರ್, ನ್ಯಾಯಾಂಗ, ಮಹಿಳಾ ಮಕ್ಕಳ ಕಲ್ಯಾಣ, ಆರೋಗ್ಯ, ಶಿಕ್ಷಣ ಸೇರಿದಂತೆ ಒಂಬತ್ತು ಇಲಾಖೆಗಳಿಗೆ ಸಂಬಂಧಿಸಿದ ಒಳಗೊಂಡ ನೂತನ ಕಾಯ್ದೆಗೆ ತಿದ್ದುಪಡಿ ಮಾಡಲು ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗಿದೆ ಎಂದು ಹೇಳಿದರು.

ಧ್ವನಿ- ಲಕ್ಷ್ಮೀ ಹೆಬ್ಬಾಳಕರ್

<><*<><>*><>

ಇಸ್ರೋದಿಂದ ಆದಿತ್ಯ ಎಲ್-೧ ನೌಕೆ ಯಶಸ್ವಿ ಉಡಾವಣೆಗೊಂಡು ಇಂದಿಗೆ ಒಂದು ವರ್ಷ ಪೂರೈಸಿದೆ. ೨೦೨೩ರ ಸೆಪ್ಟೆಂಬರ್ ೨ ರಂದು ಉಡಾವಣೆಗೊಂಡಿರುವ ಎಲ್-೧ ನೌಕೆ ಕಕ್ಷೆ ತಲುಪಿದ್ದು, ಭೂಮಿಯಿಂದ ಸುಮಾರು ೧೫ ಲಕ್ಷ ಕಿಲೋಮೀಟರ್ ದೂರದಲ್ಲಿ ಸೂರ್ಯನ ಅಧ್ಯಯನದಲ್ಲಿ ತೊಡಗಿದೆ. ಸೂರ್ಯನಲ್ಲಿನ ಶಾಖ, ಸೌರ ಭೂಕಂಪಗಳು ಹಾಗೂ ಸೌರ ಜ್ವಾಲೆ ಸಂಬಂಧಿತ ಚಟುವಟಿಕೆಗಳನ್ನು ಈ ನೌಕೆ ಅಧ್ಯಯನ ಮಾಡಲಿದೆ. ಸೂರ್ಯ ತಾಪಮಾನ, ಭೂಮಿಯ ಮೇಲ್ಮೈ ಸಮೀಪದ ವಾತಾವರಣ ಮತ್ತು ಸಂಬಂಧಿತ ಹವಾಮಾನ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ಇದರಿಂದ ನೆರವಾಗಲಿದೆ ಎಂದು ಇಸ್ರೋ ತಿಳಿಸಿದೆ. ಸೆಪ್ಟೆಂಬರ್ ೨ ರಂದು ಆದಿತ್ಯ-ಎಲ್೧ ಮಿಷನ್ ಉಡಾವಣೆಯಾಗಿದ್ದು, ಸೆಪ್ಟೆಂಬರ್ ೩ ರಂದು ಮೊದಲ ಕಕ್ಷೆ ಬದಲಾವಣೆಯನ್ನು ಯಶಸ್ವಿಯಾಗಿ ಪೂರೈಸಿತ್ತು. ಒಟ್ಟು ಐದು ಬಾರಿ ಕಕ್ಷೆ ಬದಲಾವಣೆ ಮಾಡಿಕೊಂಡ ನಂತರ ಉದ್ದೇಶಿಸಿರುವ ಲ್ಯಾಂಗ್ರೇಜ್ ಪಾಯಿಂಟ್‌ನತ್ತ ಆದಿತ್ಯ ಎಲ್-೧ ಮಿಷನ್ ಸಾಗಿತ್ತು. ಈ ವರ್ಷದ ಜನವರಿ ೬ ತಾರೀಖಿನಿಂದ ಈ ಉಪಗ್ರಹ ಸೂರ್ಯ ಕಾರ್ಯಾಚರಣೆಗಳ ಮಾಹಿತಿ ಒದಗಿಸುತ್ತಿದೆ.

<><*<><>*><>

ಸಮಾಜದಲ್ಲಿ ಮಹತ್ತರ ಬದಲಾವಣೆ ಸಾಧಿಸಲು ಶಿಕ್ಷಣ ಬಹಳ ಅವಶ್ಯಕವಾಗಿದ್ದು, ಪಾಲಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಮುಂದಾಗಬೇಕು ಎಂದು ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹ್ಮದ್ ಖಾನ್ ಕರೆ ನೀಡಿದ್ದಾರೆ. ಹುಬ್ಬಳ್ಳಿಯಲ್ಲಿ ಸರ್ಕಾರಿ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರದಿಂದ ಸುಮಾರು ೬೦ ಕೋಟಿ ರೂಪಾಯಿ ಅಲ್ಪಸಂಖ್ಯಾತರ ಶಿಷ್ಯವೇತನಕ್ಕೆ ಒದಗಿಸಲಾಗುತ್ತಿದೆ ಎಂದು ಹೇಳಿದರು. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಐಎಎಸ್, ಐಪಿಎಸ್ ತರಬೇತಿ ನೀಡಲಾಗುತ್ತಿದೆ. ಬಡವರಿಗೆ ಕಡಿಮೆ ದರದಲ್ಲಿ ಮನೆಗಳನ್ನು ನಿರ್ಮಿಸಿ ಕೊಡಲಾಗುತ್ತಿದೆ. ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನದಿಂದ ಎಲ್ಲ ಹಕ್ಕುಗಳನ್ನು ಪಡೆದುಕೊಳ್ಳುತ್ತಿದ್ದೇವೆ ಎಂದು ತಿಳಿಸಿದರು.

<><*<><>*><>

ಅರಣ್ಯ ಇಲಾಖೆಗೆ ಹೊಸದಾಗಿ ಆಯ್ಕೆಯಾಗಿರುವ ೨೬೭ ಅರಣ್ಯ ವೀಕ್ಷಕರಿಗೆ ನೇಮಕಾತಿ ಪತ್ರ ಹಾಗೂ ಗಣನೀಯ ಸೇವೆ ಸಲ್ಲಿಸಿದ ೪೯ ಅರಣ್ಯಾಧಿಕಾರಿಗಳು ಮತ್ತು ಸಿಬ್ಬಂದಿಗೆ ಮುಖ್ಯಮಂತ್ರಿ ಪದಕ ಪ್ರದಾನ ಸಮಾರಂಭ ನಾಳೆ ಬೆಂಗಳೂರಿನಲ್ಲಿ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪದಕ ಪ್ರದಾನ ಮಾಡಲಿದ್ದಾರೆ ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ತಿಳಿಸಿದ್ದಾರೆ. ಅರಣ್ಯ ಸಂರಕ್ಷಣೆ, ವನ್ಯಜೀವಿ ಸಂರಕ್ಷಣೆ, ಅರಣ್ಯ ಕೃಷಿ, ಅರಣ್ಯ ನಿರ್ವಹಣೆ, ಮಾನವ- ಪ್ರಾಣಿ ಸಂಘರ್ಷ ನಿಯಂತ್ರಣ, ನಾವೀನ್ಯಪೂರ್ಣ ಉಪಕ್ರಮ ಅಳವಡಿಕೆ ಇತ್ಯಾದಿ ಕ್ಷೇತ್ರದಲ್ಲಿ ಗಣನೀಯ ಸೇವೆ ಮಾಡಿದ ೨೫ ಅರಣ್ಯ ಅಧಿಕಾರಿ ಮತ್ತು ಸಿಬ್ಬಂದಿಯನ್ನು ಪ್ರತಿವರ್ಷ ಗುರುತಿಸಿ ೨೦೧೭ರಿಂದ ಮುಖ್ಯಮಂತ್ರಿಗಳ ಪದಕ ನೀಡಲಾಗುತ್ತಿದೆ. ೨೦೨೨ ಮತ್ತು ೨೦೨೩ನೇ ಸಾಲಿಗೆ ಒಟ್ಟು ೪೯ ಅಧಿಕಾರಿ ಹಾಗೂ ಸಿಬ್ಬಂದಿಗೆ ಮುಖ್ಯಮಂತ್ರಿಗಳು ಪದಕ ಪ್ರದಾನ ಮಾಡಲಿದ್ದಾರೆ.

<><*<><>*><>

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಉಚಿತ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಮನೆ ಯಜಮಾನಿ ಖಾತೆಗೆ ತಿಂಗಳಿಗೆ ೨ ಸಾವಿರ ರೂಪಾಯಿ ವರ್ಗಾವಣೆ ಮಾಡುವ 'ಗೃಹಲಕ್ಷ್ಮಿ' ಯೋಜನೆ ಒಂದು ವರ್ಷ ಪೂರೈಸಿದೆ. ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸಾಮಾಜಿಕ ಜಾಲ ತಾಣದಲ್ಲಿ ಸಂತಸ ಹಂಚಿಕೊಂಡಿದ್ದಾರೆ. ಗೃಹಲಕ್ಷ್ಮಿ ಯೋಜನೆಯ ಹಣದಿಂದಾಗಿ ನಾಡಿನ ಕೋಟ್ಯಂತರ ಮಹಿಳೆಯರು ನೆಮ್ಮದಿಯ ಬದುಕು ಕಟ್ಟಿಕೊಂಡಿದ್ದಾರೆ. ಗೃಹಲಕ್ಷ್ಮಿ ಯೋಜನೆ ಅನುಷ್ಠಾನಗೊಂಡಾಗಿನಿಂದ ಮಹಿಳೆಯರ ಮುಖದಲ್ಲಿ ಮಂದಹಾಸ ಮೂಡಿದೆ. ಈ ಯಶಸ್ವಿ ಪಯಣದ ಸಂಭ್ರಮದಲ್ಲಿ ತಾವೂ ಭಾಗವಹಿಸಿ, ಗೃಹಲಕ್ಷ್ಮಿಯಿಂದ ತಮಗಾದ ಉಪಯುಕ್ತತೆ ಕುರಿತು ಅನಿಸಿಕೆಗಳನ್ನು ನಮ್ಮೊಂದಿಗೆ ಹಂಚಿಕೊಳ್ಳಿ ಎಂದು ಮನವಿ ಮಾಡಿದ್ದಾರೆ.

<><*<><>*><>

೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಂಬಂಧಿಸಿದಂತೆ ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸ್ವಯಂ ಸೇವಕರು ಮತ್ತು ಉಸ್ತುವಾರಿ ಸಮಿತಿ ಸಭೆ ನಡೆಯಿತು. ಸಭೆಯಲ್ಲಿ ಮಾತನಾಡಿದ ವಿಧಾನಪರಿಷತ್ ಸದಸ್ಯ ಹಾಗೂ ಸ್ವಯಂ ಸೇವಕರು ಮತ್ತು ಉಸ್ತುವಾರಿ ಸಮಿತಿಯ ಅಧ್ಯಕ್ಷ ಕೆ.ವಿವೇಕಾನಂದ ಸಮ್ಮೇಳನ ಪರಿಣಾಮಕಾರಿಯಾಗಿ ಜರುಗಲು ಮಂಡ್ಯ ಜಿಲ್ಲೆಯಲ್ಲಿರುವ ಎನ್‌ಸಿಸಿ, ಎನ್‌ಎಸ್‌ಎಸ್ ಹಾಗೂ ಸ್ಕೌಟ್ ಮತ್ತು ಗೈಡ್ಸ್ ತಂಡಗಳ ಸ್ವಯಂ ಸೇವಕರಿಗೆ ಪೂರ್ಣ ಪ್ರಮಾಣದ ತರಬೇತಿ ನೀಡುವುದು ಬಹುಮುಖ್ಯವಾಗಿದೆ ಎಂದು ತಿಳಿಸಿದರು.

<><*<><>*><>

ಪ್ರಕರಣಗಳ ಶೀಘ್ರ ವಿಲೇವಾರಿ, ನೊಂದವರಿಗೆ ನ್ಯಾಯ ಒದಗಿಸಲು ನ್ಯಾಯಾಂಗ ಇಲಾಖೆ, ಅಭಿಯೋಜನಾ ಇಲಾಖೆ ಹಾಗೂ ಪೊಲೀಸ್ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದು ದಾವಣಗೆರೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ತಿಳಿಸಿದ್ದಾರೆ. ನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ

ಅವರು, ಸಮಾಜದಲ್ಲಿ ಪೊಲೀಸರು, ಅಭಿಯೋಜಕರು ಹಾಗೂ ನ್ಯಾಯಾಧೀಶರ ಜವಾಬ್ದಾರಿ ಹೆಚ್ಚಿದ್ದು, ನ್ಯಾಯಾಂಗ ತಪ್ಪು ಮಾಡಿದರೆ ಇಡೀ ಸಮಾಜಕ್ಕೆ ತಪ್ಪು ಸಂದೇಶ ರವಾನೆಯಾಗುತ್ತದೆ ಎಂದು ಹೇಳಿದರು.

<><*<><>*><>

ಯಾದಗಿರಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಸುರಿದ ಮಳೆಗೆ ಜನ ಜೀವನ ಸಂಪೂರ್ಣ ಅಸ್ತವ್ಯಸ್ಥವಾಗಿದೆ. ಯಾದಗಿರಿ ನಗರದ ಬಹುತೇಕ ಬಡಾವಣೆಗಳಲ್ಲಿನ ರಸ್ತೆಗಳು ಜಲಾವೃತ್ತವಾಗಿವೆ ಎಂದು ನಮ್ಮ ಬಾತ್ಮೀದಾರರು ತಿಳಿಸಿದ್ದಾರೆ. ಶಹಾಪುರ ತಾಲ್ಲೂಕಿನ ಹುರಸಗುಂಡಗಿ ಗ್ರಾಮದಲ್ಲಿ ನಿನ್ನೆ ಮನೆಯ ಗೋಡೆ ಕುಸಿದು ಶಕಿನಾಬಿ ಮಹೆಬೂಬುಸಾಬ್ ಎಂಬ ಮಹಿಳೆ ಮೃತಪಟ್ಟಿದ್ದಾರೆ. ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯದ ೨೫ ಗೇಟ್‌ಗಳಿಂದ ೧ ಲಕ್ಷದ ೮ ಸಾವಿರ ಕ್ಯುಸೆಕ್ ನೀರನ್ನು ಕೃ? ನದಿಗೆ ಹರಿಬಿಡಲಾಗುತ್ತಿದೆ. ಪಶ್ಚಿಮಘಟ್ಟದ ಜಲಾನಯನ ಪ್ರದೇಶದಲ್ಲಿ ನಿರಂತರ ಮಳೆ ಆಗುತ್ತಿರುವುದರಿಂದ ಬಸವಸಾಗರ ಜಲಾಶಯಕ್ಕೆ ನಿರಂತರವಾಗಿ ನೀರು ಹರಿದು ಬರುತ್ತಿದ್ದು ಒಳಹರಿವನ್ನು ಗಮನಿಸಿ ಕೃ? ನದಿಗೆ ನೀರುಬಿಡಲಾಗುತ್ತಿದೆ.

<><*<><>*><>

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೬೩ನೇ ರಾಷ್ಟ್ರೀಯ ಮುಕ್ತ ಕ್ರೀಡಾಕೂಟಕ್ಕೆ ಇಂದು ತೆರೆ ಬೀಳಲಿದೆ. ಪುರುಷರ ೧೦ ಸಾವಿರ ಮೀಟರ್ ಸ್ಪರ್ಧೆಯಲ್ಲಿ ರೈಲ್ವೆಸ್‌ನ ಅಭಿಷೇಕ್ ಚಿನ್ನ ಗೆದ್ದಿದ್ದಾರೆ. ಕ್ರೀಡಾಕೂಟದ ನಾಲ್ಕನೇ ಹಾಗೂ ಅಂತಿಮ ದಿನವಾದ ಇಂದು ಅಭಿಷೇಕ್ ೨೯ ನಿಮಿಷ ೪೮.೧೮ ಸೆಕೆಂಡ್ಸ್ ಗಳಲ್ಲಿ ಅಗ್ರಸ್ಥಾನ ಪಡೆದು ಸ್ವರ್ಣ ಪದಕ ತಮ್ಮದಾಗಿಸಿಕೊಂಡರು. ಮಹಾರಾಷ್ಟ್ರದ ಅರುಣ್ ರಾಥೋಡ್ ಮತ್ತು ಎಸ್‌ಎಸ್ ಸಿಬಿಯ ಸುನಿಲ್ ಕುಮಾರ್ ಕ್ರಮವಾಗಿ ಬೆಳ್ಳಿ ಮತ್ತು ಕಂಚಿನ ಪದಕ ಗೆದ್ದುಕೊಂಡರು. ೧೦ ಸಾವಿರ ಮೀಟರ್ ಸ್ಪರ್ಧೆಯ ಮಹಿಳೆಯರ ವಿಭಾಗದಲ್ಲಿ ಹಿಮಾಚಲ ಪ್ರದೇಶ, ರೈಲ್ವೆ ಕ್ರೀಡಾ ವಿಭಾಗ ಮತ್ತು ಉತ್ತರ ಪ್ರದೇಶ ತಂಡಗಳು ಮೊದಲ ಮೂರು ಸ್ಥಾನ ತಮ್ಮದಾಗಿಸಿಕೊಂಡವು. ಹಿಮಾಚಲ ಪ್ರದೇಶದ ಸೀಮಾ ೩೩ ನಿಮಿಷ ೫೬.೮೬ ಸೆಕೆಂಡ್ ಗಳಲ್ಲಿ ಮೊದಲ ಸ್ಥಾನ ಗಳಿಸಿದರು. ಇಂದು ಕೂಟದ ಅಂತಿಮ ದಿನವಾಗಿದ್ದು, ರೈಲ್ವೆಸ್ ತಂಡ, ಪದಕ ಪಟ್ಟಿಯಲ್ಲಿ ಮೇಲುಗೈ ಸಾಧಿಸಿದೆ.

ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಸುಮಾರು ೯೦೦ ಕ್ರೀಡಾಪಟುಗಳಲ್ಲಿ ಕರ್ನಾಟಕದ ೫೧ ಕ್ರೀಡಾಪಟುಗಳು ಸ್ಪರ್ಧಿಸಿದ್ದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ೨೦೨೪-೨೫ ನೇ ಸಾಲಿಗೆ ಉದ್ಯೋಗಿನಿ, ಚೇತನಾ, ಧನಶ್ರೀ, ಲಿಂಗತ್ವ, ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ ಮತ್ತು ದೇವದಾಸಿ ಪುನರ್ವಸತಿ ಯೋಜನೆಯಡಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಸಕ್ತರು ಸಪ್ಟೆಂಬರ್ ೨೧ ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದು ಎಂದು ಮುಂಡಗೋಡ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೨.	ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ವಿಶ್ವಪ್ರಸಿದ್ಧ ಶಿವನಸಮುದ್ರದ ಗಗನಚುಕ್ಕಿ ಪ್ರವಾಸಿ ತಾಣವನ್ನು ಅಭಿವೃದ್ಧಿ ಪಡಿಸುವುದಕ್ಕಾಗಿ ಜಲಪಾತೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ನರೇಂದ್ರಸ್ವಾಮಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ತಿಂಗಳ ೨, ೩ ಅಥವಾ ಕೊನೆಯ ವಾರದಲ್ಲಿ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**